**All India Radio: Bangalore**
**Regional Bulletin In Kannada**
**02.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.04.2025 / 2.30 p.m.**

*********************

ಮುಖ್ಯಾಂಶಗಳು

೧. ಲೋಕಸಭೆಯಲ್ಲಿಂದು ವಕ್ಫ್ ತಿದ್ದುಪಡಿ ಮಸೂದೆ ಮಂಡನೆ

೨. ಪೊಲೀಸರು ಸೈಬರ್ ಅಪರಾಧಗಳನ್ನು ತಂತ್ರಜ್ಞಾನದ ಮೂಲಕ ನಿಗ್ರಹಿಸಬೇಕು - ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

೩. ನಾರಾಯಣಪುರ ಜಲಾಶಯದಿಂದ ಬೆಳೆಗಳಿಗೆ ನೀರು ಹರಿಸುವಂತೆ ಸರ್ಕಾರಕ್ಕೆ ರೈತರ ನಿಯೋಗ ಮನವಿ

೪. ೧೮ ಶಾಸಕರ ಅಮಾನತು ಪ್ರಕರಣ; ಆದೇಶ ಹಿಂಪಡೆಯುವಂತೆ ವಿಧಾನಸೌಧದ ಬಳಿ ಬಿಜೆಪಿ ಪ್ರತಿಭಟನೆ

೫. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಗುಜರಾತ್ ಟೈಟಾನ್ಸ್ ಮುಖಾಮುಖಿ; ಮಧ್ಯಾಹ್ನ ೩ ರಿಂದ ಸಂಚಾರ ಮಾರ್ಗ ಬದಲು

****************

ಲೋಕಸಭೆಯಲ್ಲಿಂದು ವಕ್ಫ್ ತಿದ್ದುಪಡಿ ಮಸೂದೆಯನ್ನು ಮಂಡಿಸಲಾಯಿತು. ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತರ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ವಕ್ಫ್ ತಿದ್ದುಪಡಿ ವಿಧೇಯಕ-೨೦೨೫ ಅನ್ನು ಮಂಡಿಸಿದರು.
ಬಳಿಕ ಮಾತನಾಡಿದ ಸಚಿವರು, ಈ ಕಾಯ್ದೆ ಕುರಿತಂತೆ ೯೭ ಲಕ್ಷ ೨೭ ಸಾವಿರದ ೭೭೨ ಪ್ರಸ್ತಾವಗಳು, ಸಲಹೆ, ಅಭಿಪ್ರಾಯಗಳನ್ನು ಸರ್ಕಾರ ಹಾಗೂ ಜಂಟಿ ಸಂಸದೀಯ ಸಂಸ್ಥೆ ಸ್ವೀಕರಿಸಿದೆ. ೨೫ ರಾಜ್ಯಗಳ ವಕ್ಫ್ ಬೋರ್ಡ್‌ಗಳ ಅಭಿಪ್ರಾಯ ಪರಿಗಣಿಸಿ, ಸರ್ಕಾರ ತಿದ್ದುಪಡಿ ಮಸೂದೆ ಮಂಡಿಸಿದೆ ಎಂದು ಸ್ಪಷ್ಟಪಡಿಸಿದರು.
ಧ್ವನಿ: ಕಿರಣ್ ರಿಜಿಜು

ವಕ್ಫ್ ಮಂಡಳಿಯಲ್ಲಿ ಒಟ್ಟು ೨೨ ಸದಸ್ಯರು ಇರಲಿದ್ದು, ಇಬ್ಬರು ಮುಸ್ಲಿಂ ಮಹಿಳೆಯರಿಗೆ ಸ್ಥಾನ ಕಲ್ಪಿಸಲಾಗಿದೆ. ಇದರ ಜೊತೆಗೆ ಒಬ್ಬ ಸಂಸದ, ಒಬ್ಬ ಶಾಸಕ ಹಾಗೂ ೪ ಜನ ಮುಸ್ಲೀಮೇತರ ಸದಸ್ಯರು ಮಂಡಳಿಯಲ್ಲಿ ಇರಲಿದ್ದಾರೆ ಎಂದು ತಿಳಿಸಿದರು. ವಕ್ಫ್ ತಿದ್ದುಪಡಿ ಮಸೂದೆಗೆ ಪ್ರತಿಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿದವು.
ಈ ವೇಳೆ ಮಧ್ಯ ಪ್ರವೇಶಿಸಿದ ಗೃಹ ಸಚಿವ ಅಮಿತ್ ಶಾ, ಪ್ರತಿಪಕ್ಷಗಳ ಆರೋಪಗಳು ಆಧಾರರಹಿತ ಎಂದು ಸ್ಪಷ್ಟಪಡಿಸಿದರು.

****************

ರಾಜ್ಯದ ಅಭಿವೃದ್ಧಿಯಲ್ಲಿ ಕಾನೂನು ಸುವ್ಯವಸ್ಥೆ ಪಾತ್ರ ಬಹಳ ಮುಖ್ಯವಾಗಿದ್ದು ಇದನ್ನು ಕಾಪಾಡುವಲ್ಲಿ ಪೊಲೀಸರ ಪಾತ್ರ ಬಹು ದೊಡ್ಡದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ತಿಳಿಸಿದ್ದಾರೆ.

ಬೆಂಗಳೂರಿನ ಕೋರಮಂಗಲ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಮುಖ್ಯಮಂತ್ರಿಗಳ ಪದಕ ಪುರಸ್ಕೃತರಿಗೆ ಪದಕ ಪ್ರದಾನ ಮಾಡಿ ಮಾತನಾಡಿದ ಅವರು, ತಂತ್ರಜ್ಞಾನದ ಬೆಳವಣಿಗೆಯಿಂದ ಸೈಬರ್

ಅಪರಾಧಗಳು ವ್ಯಾಪಕವಾಗಿ ಹೆಚ್ಚುತ್ತಿವೆ. ಅದೇ ತಂತ್ರಜ್ಞಾನದ ಸಾಧ್ಯತೆಗಳನ್ನು ಬಳಸಿಕೊಂಡು ಸೈಬರ್ ಅಪರಾಧಗಳನ್ನು ನಿಗ್ರಹಿಸಬೇಕು ಎಂದು ಪೊಲೀಸರಿಗೆ ಕರೆ ನೀಡಿದರು. ಮಾದಕ ವಸ್ತು ಮುಕ್ತ ರಾಜ್ಯ ಮಾಡುವುದು ಸರ್ಕಾರದ ಗುರಿ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ

****************

ರಾಜ್ಯದ ವಿವಿಧೆಡೆ ಇಂದು ಪೊಲೀಸ್ ಧ್ವಜ ದಿನಾಚರಣೆ ನಡೆಯಿತು. ಕರ್ನಾಟಕ ಏಕೀಕರಣದ ಬಳಿಕ ಕರ್ನಾಟಕ ಪೊಲೀಸ್ ಪಡೆಯನ್ನು ೧೯೬೫ರ ಏಪ್ರಿಲ್ ೨ ರಂದು ಕರ್ನಾಟಕ ಪೊಲೀಸ್ ಕಾಯ್ದೆಗೆ ಒಳಪಡಿಸಲಾಯಿತು. ಅದರ ಸ್ಮರಣೆಗಾಗಿ ಪ್ರತಿ ವರ್ಷ ಪೊಲೀಸ್ ಧ್ವಜ ದಿನವನ್ನಾಗಿ ಆಚರಿಸಲಾಗುತ್ತದೆ. ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ ಸಂಗ್ರಹವಾದ ಹಣವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳ ಕಲ್ಯಾಣ ನಿಧಿಗೆ ನೀಡಲಾಗುತ್ತದೆ.

ಹುಬ್ಬಳ್ಳಿಯ  ಕಾರವಾರ ರಸ್ತೆಯ ಹಳೆಯ ಸಶಸ್ತ್ರ ಮೀಸಲು ಪಡೆಯ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ನಿವೃತ್ತ ಪೊಲೀಸ್ ಸಬ್ ಇನ್ಸಪೆಕ್ಟರ್ ಎಸ್.ಎಸ್.ಜಕ್ಕನಗೌಡ್ರ ಮಾತನಾಡಿ, ರಾಜ್ಯದ ಪೊಲೀಸ್ ಇಲಾಖೆ ಅತ್ಯುತಮ ಕಾರ್ಯನಿರ್ವಹಣೆಯಿಂದ ಇಡೀ ರಾಷ್ಟ್ರದಲ್ಲಿ ಮನ್ನಣೆಗಳಿಸಿದೆ ಎಂದು ಹೇಳಿದ್ದಾರೆ.

ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಮೂಲಕ ಪೊಲೀಸ್ ಇಲಾಖೆ ಜನಸ್ನೇಹಿ ಎಂದು ಸಾರ್ವಜನಿಕರಿಗೆ ಮನದಟ್ಟು ಮಾಡಬೇಕಿದೆ ಎಂದು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ  ಹೇಳಿದ್ದಾರೆ.

ಚಿತ್ರದುರ್ಗದ ಡಿ.ಆರ್.ಮೈದಾನದಲ್ಲಿ ಪೊಲೀಸ್ ಧ್ವಜ ಮತ್ತು ಕಲ್ಯಾಣ ದಿನಾಚರಣೆ  ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಮತ್ತು ಜಿಲ್ಲಾ ವರಿಷ್ಠಾಧಿಕಾರಿ ರಣಜಿತ್ ಭಂಡಾರು ಕಾರ್ಯಕ್ರಮ ಉದ್ಘಾಟಿಸಿದರು.

ಬಳ್ಳಾರಿಯ  ಡಿಎಆರ್ ಮೈದಾನದಲ್ಲಿ  ನಡೆದ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ೨೦೨೪-೨೫ ನೇ ಸಾಲಿನ ಉತ್ತಮ ಕಾರ್ಯ ನಿರ್ವಹಿಸಿದ ೧೭೮ ಪೋಲಿಸ್ ಅಧಿಕಾರಿ ಮತ್ತು ಸಿಬ್ಬಂದಿಗೆ ೧ ಲಕ್ಷ ನಗದು ಬಹುಮಾನ ನೀಡಲಾಗಿದೆ ಎಂದು ತಿಳಿಸಿದರು.

****************

ಬೇಸಿಗೆ ಸಮಯದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸುವುದು ಸರ್ಕಾರದ ಮೊದಲ ಆದ್ಯತೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸಚಿವ ಶರಣಬಸಪ್ಪ ದರ್ಶನಾಪುರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಪ್ರತಿನಿಧಿಗಳ ನಿಯೋಗವು ಜಲಸಂಪನ್ಮೂಲ ಸಚಿವರೂ ಆಗಿರುವ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಈ ವೇಳೆ ನಾರಾಯಣಪುರ ಬಸವಸಾಗರ ಜಲಾಶಯದ ಬಲದಂಡೆ ಹಾಗೂ ಎಡದಂಡೆಯಿಂದ ಇದೇ ೧೫ರವರೆಗೆ ಬೆಳೆಗಳಿಗೆ ನೀರು ಹರಿಸಬೇಕು ಎಂದು ಮನವಿ ಸಲ್ಲಿಸಿದರು. ಜಲಾಶಯದಲ್ಲಿ ಕೃಷಿಗಾಗಿ ೬.೯೦ ಟಿಎಂಸಿ ನೀರನ್ನು

ಕಾಯ್ದಿರಿಸಲಾಗಿದ್ದು ಅದನ್ನು ಹರಿಸಿದರೆ ಮಾತ್ರ ರೈತರಿಗೆ ಬೆಳೆದಿರುವ ಬೆಳೆ ಕೈ ಸೇರಲಿದೆ ಎಂದು ಮನವಿ ಪತ್ರದಲ್ಲಿ ಕೋರಲಾಗಿದೆ.

ಬಳಿಕ ಮಾತನಾಡಿದ ಡಿ.ಕೆ. ಶಿವಕುಮಾರ್ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗುತ್ತಿದ್ದು ಈ ವಿಚಾರದಲ್ಲಿ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

****************

ರಾಜ್ಯದ ವಿಶ್ವವಿದ್ಯಾಲಯಗಳ ಗುಣಮಟ್ಟ ಅಧ್ಯಯನಕ್ಕೆ ಸಂಪುಟ ಉಪಸಮಿತಿ ರಚಿಸಲಾಗಿದೆ. ಸಮಿತಿ ನೀಡುವ ವರದಿ ಆಧರಿಸಿ ವಿಶ್ವವಿದ್ಯಾಲಯಗಳ ಸುಧಾರಣೆಗೆ ಸರಕಾರ ಕ್ರಮ ಕೈಗೊಳ್ಳಲಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ದಾವಣಗೆರೆ ವಿಶ್ವವಿದ್ಯಾಲಯದ ೧೨ ವಾರ್ಷಿಕ ಘಟಿಕೋತ್ಸವದಲ್ಲಿಂದು ಮಾತನಾಡಿದ ಅವರು, ವಿಶ್ವವಿದ್ಯಾಲಯಗಳಲ್ಲಿ ಇರುವ ಸಮಸ್ಯೆ ಪರಿಹರಿಸಲು ಸರ್ಕಾರ ಆದ್ಯತೆ ನೀಡಲಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಹಾಗೂ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.

****************

ಬಿಜೆಪಿಯ ೧೮ ಶಾಸಕರನ್ನು ಅಮಾನತು ಮಾಡಿದ ಸಭಾಧ್ಯಕ್ಷರ ನಿರ್ಣಯ ಖಂಡಿಸಿ ಬಿಜೆಪಿ ಶಾಸಕರು ಇಂದು ವಿಧಾನಸೌಧದ ಎದುರು ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿದರು.

ಬಳಿಕ ಸಭಾಧ್ಯಕ್ಷರ ಕಚೇರಿಗೆ ತೆರಳಿ ಅಮಾನತು ಆದೇಶ ರದ್ದುಗೊಳಿಸುವಂತೆ ಮನವಿ ಮಾಡಿದರು. ಜಂಟಿ ಕಾರ್ಯದರ್ಶಿಗಳ ಮೂಲಕ ವಿಧಾನಸಭಾ ಸಭಾಧ್ಯಕ್ಷರಿಗೆ ಮನವಿ ಸಲ್ಲಿಸಲಾಯಿತು.

ಬಳಿಕ ಬಿಜೆಪಿ ನಾಯಕರು ಸ್ವಾತಂತ್ರ್ಯ ಉದ್ಯಾನವನಕ್ಕೆ ತೆರಳಿ ಹಾಲು, ಮೊಸರು, ವಿದ್ಯುತ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ಅಹೋರಾತ್ರಿ ಧರಣಿಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಬಹುತೇಕ ಎಲ್ಲ ನಾಯಕರು ಪಾಲ್ಗೊಂಡಿದ್ದಾರೆ.

****************

ನವ ಮಂಗಳೂರು ಬಂದರು ೨೦೨೪-೨೫ನೇ ಹಣಕಾಸು ವರ್ಷದಲ್ಲಿ ೪೬.೦೧ ಎಂಎಂಟಿ ಸರಕು ನಿರ್ವಹಣೆ ಮಾಡುವ ಮೂಲಕ ಸಾರ್ವಕಾಲಿಕ ದಾಖಲೆ ನಿರ್ಮಿಸಿದೆ ಎಂದು ಎನ್‌ಎಂಪಿಎ ಅಧ್ಯಕ್ಷ ಡಾ.ವೆಂಕಟರಮಣ ಅಕ್ಕರಾಜು ತಿಳಿಸಿದ್ದಾರೆ. ಬಂದರಿನ ಸುವರ್ಣ ಮಹೋತ್ಸವ ವರ್ಷದಲ್ಲಿ ಈ ಗಮನಾರ್ಹ ಮೈಲಿಗಲ್ಲನ್ನು ಸಾಧಿಸಿರುವುದು ವಿಶೇಷ ಎಂದು ಹೇಳಿದ್ದಾರೆ. ೨೦೨೪-೨೫ನೇ ಹಣಕಾಸು ವರ್ಷದಲ್ಲಿ ೬೦೦ ಕೋಟಿ ರೂಪಾಯಿ ತೆರಿಗೆ ನಂತರ ತಾತ್ಕಾಲಿಕ ಲಾಭ ಪಡೆದಿದ್ದು, ಇದು ಕಳೆದ ವರ್ಷಕ್ಕಿಂತ ಶೇಕಡ ೫.೨ರಷ್ಟು ಏರಿಕೆಯಾಗಿದೆ ಎಂದು ಅವರು ಹೇಳಿದ್ದಾರೆ.

****************

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ತಂಡಗಳು ಸೆಣಸಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಪ್ರಾರಂಭವಾಗಲಿದೆ.

ಪಂದ್ಯದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಭದ್ರತೆ ಹೆಚ್ಚಿಸಲಾಗಿದೆ. ಕ್ರೀಡಾಂಗಣದ ಸುತ್ತಮುತ್ತಲಿನ ರಸ್ತೆಗಳಲ್ಲಿ ಮಧ್ಯಾಹ್ನ ೩ ರಿಂದ ರಾತ್ರಿ ೧೨ರವರೆಗೆ ಸಂಚಾರ ನಿಷೇಧಿಸಲಾಗಿದೆ. ನಾಲ್ಕು ಮೆಟ್ರೊ ಟರ್ಮಿನಲ್‌ಗಳಿಂದ ಕೊನೆಯ ಮೆಟ್ರೊ ಸೇವೆಯನ್ನು ರಾತ್ರಿ ೧೨.೩೦ರವರೆಗೆ ವಿಸ್ತರಿಸಲು ಬೆಂಗಳೂರು ಮೆಟ್ರೋ ರೈಲು ನಿಗಮ ನಿರ್ಧರಿಸಿದೆ. ಇದೇ ವೇಳೆ, ಬಿಎಂಟಿಸಿ ಹೆಚ್ಚುವರಿ ಬಸ್ ಸೇವೆ ಒದಗಿಸಲು ನಿರ್ಧರಿಸಿದೆ.

********ಮುಕ್ತಾಯ********